# Official Spokesperson's response to media queries on false allegations made by Pakistan’s Foreign Minister

August 13, 2021

## ಪಾಕಿಸ್ತಾನದ ವಿದೇಶಾಂಗ ಸಚಿವರು ಮಾಡಿದ ದೋಷಪೂರಿತ ಆರೋಪಗಳ ಕುರಿತು ಮಾಧ್ಯಮದ ಪ್ರಶ್ನೆಗಳಿಗೆ ಅಧಿಕೃತ ವಕ್ತಾರರ ಪ್ರತಿಕ್ರಿಯೆ

ಆಗಸ್ಟ್ 13, 2021

**ಪಾಕಿಸ್ತಾನದ ವಿದೇಶಾಂಗ ಸಚಿವರ ದೋಷಪೂರಿತ ಆರೋಪಗಳ ಕುರಿತು ಮಾಧ್ಯಮದ ಪ್ರಶ್ನೆಗಳಿಗೆ ಪ್ರತಿಕ್ರಿಯೆಯಾಗಿ, ಅಧಿಕೃತ ವಕ್ತಾರ ಶ್ರೀ ಅರಿಂದಮ್ ಬಾಗ್ಚಿ ಹೀಗೆ ಹೇಳಿದರು,**

"ದಾಸುವಿನಲ್ಲಿ ನಡೆದ ಘಟನೆಯ ಬಗ್ಗೆ ಪಾಕಿಸ್ತಾನದ ವಿದೇಶಾಂಗ ಸಚಿವರು ಮಾಡಿದ ಅಸಂಬದ್ಧ ಪ್ರತಿಕ್ರಿಯೆ ವರದಿಗಳನ್ನು ನಾವು ನೋಡಿದ್ದೇವೆ.

ಪ್ರಾದೇಶಿಕ ಅಸ್ಥಿರತೆಯ ಕೇಂದ್ರಬಿಂದು ಮತ್ತು ನಿಷೇಧಿತ ಭಯೋತ್ಪಾದಕರಿಗೆ ಸುರಕ್ಷಿತ ತಾಣಕ್ಕೆ ಹೆಸರುವಾಸಿಯಾಗಿರುವ ಪಾಕಿಸ್ತಾನವು ಅಂತಾರಾಷ್ಟ್ರೀಯ ಗಮನವನ್ನು ಬೇರೆಡೆಗೆ ಸೆಳೆಯಲು ಭಾರತವನ್ನು ನಿಂದಿಸುವ ಇನ್ನೊಂದು ಪ್ರಯತ್ನವಾಗಿದೆ.

ಅಂತರಾಷ್ಟ್ರೀಯ ಸಮುದಾಯದ ಸಹಭಾಗಿತ್ವದಲ್ಲಿ ಭಯೋತ್ಪಾದನೆ ವಿರುದ್ಧದ ಜಾಗತಿಕ ಪ್ರಯತ್ನಗಳಲ್ಲಿ ಭಾರತ ಮುಂಚೂಣಿಯಲ್ಲಿದೆ, ಭಯೋತ್ಪಾದನೆಯ ವಿಚಾರದಲ್ಲಿ ಪಾಕಿಸ್ತಾನದ ಯೋಗ್ಯತೆ ಬಗ್ಗೆ ಚೆನ್ನಾಗಿ ತಿಳಿದಿದೆ. ಸುಳ್ಳು ಸುದ್ದಿ ಪ್ರಚಾರ ಮಾಡುವಲ್ಲಿ ಪಾಕಿಸ್ತಾನದ ಇಂತಹ ಹತಾಶ ಪ್ರಯತ್ನಗಳನ್ನು ಕೆಲವರು ಮಾತ್ರ ಒಪ್ಪಿಕೊಳ್ಳುತ್ತಾರೆ.

**ನವ ದೆಹಲಿ**
**ಆಗಸ್ಟ್ 13, 2021**

DISCLAIMER: This is an approximate translation. The original is available in English on MEA’s website and may be referred to as the official press release.